ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಲಯ, ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **: 38/2020**

ಚಾ.ಸಾ. **:-14**
ಪ್ರಾ.ಸಾ. **:-08**

ಹೆಸರು : ಕಿರಣ್

ತಂದೆಯ ಹೆಸರು : ಬಸವರಾಜು

ವಯಸ್ಸು : 30 ವರ್ಷ

ಉದ್ಯೋಗ : ಚಾಲಕರು

ವಾಸಸ್ಥಳ : ತುಂಗನಗರ, ಮಾಗಡಿ.

---

ಪ್ರಮಾಣೀಕರಿಸಲಾದ ದಿನಾಂಕಃ**- 22.06.2026**

ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-19 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-19(ಬಿ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ನನ್ನ ಜೊತೆ ಬೇರೆ ಸಾಕ್ಷಿಗಳು ಸಹ ಹಾಜರಿದ್ದರು. ಸದರಿ ಮಹಜರ್ ನಲ್ಲಿ ಪೊಲೀಸರು ಕೃತ್ಯ ಸ್ಥಳದ ಕಚ್ಚಾ ನಕಾಶೆಯನ್ನು ತಯಾರು ಮಾಡಿರುತ್ತಾರೆ. ಕಚ್ಚಾ ನಕಾಶೆಯನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-20 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-20(ಬಿ) ಎಂದು ಗುರುತಿಸಲಾಯಿತು.

ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದ ಬಳಿ ಮಾಡಿರುತ್ತೇನೆ. ಸದರಿ ದಾಖಲೆಗೆ ಸಹಿ ಮಾಡುವಾಗ ನನ್ನ ಸಮಕ್ಷಮ ಪೊಲೀಸರು ಅಪಘಾತಕ್ಕೆ ಸಂಬಂಧಿಸಿದಂತೆ 3 ವಾಹನಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ. ಈಗ ನೋಡುತ್ತಿರುವ ಫೋಟೋಗಳಲ್ಲಿರುವ 3 ವಾಹನಗಳನ್ನು

ಆ ದಿನ ಅಮಾನತ್ತುಪಡಿಸಿಕೊಂಡಿರುತ್ತಾರೆ. Swift Desire ಕಾರಿನ 4 ಫೋಟೋಗಳನ್ನು ಈಗ ನೋಡುತ್ತಿದ್ದು ಅವುಗಳನ್ನು ಈಗಾಗಲೇ ನಿಪಿ-8 ರಿಂದ 11 ಎಂದು ಗುರುತಿಸಲಾಗಿದೆ. ಟೊಯೋಟಾ ಕಾರಿನ 1 ಫೋಟೋವನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-12 ಎಂದು ಗುರುತಿಸಲಾಗಿದೆ. Maruthi Swift ಕಾರಿನ 2 ಫೋಟೋಗಳನ್ನು ಈಗ ನೋಡುತ್ತಿದ್ದು ಅವುಗಳನ್ನು ಈಗಾಗಲೇ ನಿಪಿ-13 ಮತ್ತು 14 ಎಂದು ಗುರುತಿಸಲಾಗಿದೆ.

ಮಹಜರ್ ಸಮಯದಲ್ಲಿ ಪೊಲೀಸರು ಫೋಟೋ ತೆಗೆದಿದ್ದು ಅದರಲ್ಲಿ ನನ್ನ ಮತ್ತು ಉಳಿದ ಸಾಕ್ಷಿದಾರರ  ಭಾವಚಿತ್ರ ಇರುತ್ತದೆ. ಸದರಿ ಫೋಟೋಗಳನ್ನು ಈಗಾಗಲೇ ನಿಪಿ-2 ರಿಂದ 7 ಎಂದು ಗುರುತಿಸಲಾಗಿದೆ.

<u>ಪಾಟೀ ಸವಾಲು **:** ಆರೋಪಿ ಪರ ವಕೀಲರಿಂದ **:**</u>

ಪೊಲೀಸರು ಮಹಜರ್ ಗೆ ಬರಬೇಕೆಂದು ನೋಟೀಸ್ ಕೊಟ್ಟಿಲ್ಲ, ಬನ್ನಿ ಎಂದು ಕರೆದಿದ್ದರು. ಮಹಜರ್ ಗೆ ಅಪಘಾತ ಸ್ಥಳವಾದ ಟಿ.ಎಂ.ಹೊಸೂರು ಗೇಟ್ ಬಳಿ ನಾನು ಸಹಿ ಮಾಡಿರುತ್ತೇನೆ. ಮಹಜರ್ ಸಮಯದಲ್ಲಿ ಅಪಘಾತ ಸ್ಥಳವನ್ನು ಪೊಲೀಸರು ತೋರಿಸಿರುತ್ತಾರೆ. ನಾನು ಸಹಿಯನ್ನು ಪೊಲೀಸ್ ಠಾಣೆಯ ಬಳಿ ಮಾಡಿರುತ್ತೇನೆ ಎಂದರೆ ಸುಳ್ಳು. ವಿಮೆ ಪರಿಹಾರ ಕೊಡಿಸಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ **:-** ಇಲ್ಲ**.**</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

**ಸಾಕ್ಷಿದಾರರ ಸಹಿ.**